ಶಿವಮೊಗ್ಗ ಜಿಲ್ಲೆಯಲ್ಲಿ ಬಗರ್ ಹುಕುಂ ಸಾಗುವಳಿ.

4160(4548) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ):— ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಶಿವಮೊಗ್ಗ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಬಗರ್ ಹುಕುಂ ಸಾಗುವಳಿ ಮಂಜೂರಾತಿಗೆ ಫಾರಂ ನಂ. 53ರಲ್ಲಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು?

ಆ) ಇವುಗಳಲ್ಲಿ ಜಿಲ್ಲಾಧಿಕಾರಿ ಅಥವಾ ವಿಭಾಗಾಧಿಕಾರಿಯಿಂದ ತಪಾಸಣೆಯಾಗಿ ಸಕ್ರಮ ಸಮಿತಿಗಳ ಮುಂದೆ ಕಳಿಸಲ್ಪಟ್ಟ ಅರ್ಜಿಗಳ ಸಂಖ್ಯೆ ಎಷ್ಟು? ಇವುಗಳಲ್ಲಿ ಅಂತಿಮ ನಿರ್ಣಯ ಕೈಗೊಂಡು ಮಂಜೂರಾದ ಪ್ರಕರಣ ಎಷ್ಟು? (ತಾಲ್ಲೂಕುವಾರು ವಿವರ ನೀಡಿ)

ಇ) ಇಷ್ಟೊಂದು ಅರ್ಜಿ ವಿಚಾರಣೆ ಜಿಲ್ಲಾಧಿಕಾರಿಯಿಂದ ಸಾಧ್ಯವಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಈ ಅಧಿಕಾರವನ್ನು ತಾಲ್ಲೂಕು ಬಗರ್ ಹುಕುಂ ಸಕ್ರಮೀಕರಣ ಸಮಿತಿಗೆ ವಹಿಸುವ ಬಗ್ಗೆ ಕಾನೂನು ತಿದ್ದುಪಡಿಗೆ ಸರ್ಕಾರ ಯೋಚಿಸಿದೆಯೇ?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು):—

ಅ) 1,45,172

ಆ) ಯಾವುದೂ ಇರುವುದಿಲ್ಲ

ಇ) ಬಂದಿದೆ

ಈ) ಪರಿಶೀಲಿಸಲಾಗುವುದು

ರಾಜ್ಯದಲ್ಲಿ "ರೈತರ ಬಜಾರ್".

4161(4552) ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ):— ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ರೈತರ ಬಜಾರ್ ಆರಂಭಿಸಲು ಸರ್ಕಾರ ಆಲೋಚಿಸಿದೆಯೇ;

ಆ) ಹಾಗಿದ್ದಲ್ಲಿ, ಎಂದಿನಿಂದ ಇದನ್ನು ಪ್ರಾರಂಭಿಸಲಾಗುವುದು?

ಶ್ರೀ ಆರ್.ವಿ. ತಿಮ್ಮಾಪುರ್ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು):—

ಅ) ಹೌದು